# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/235/ಗ್ರಾಪಂಕಾ/2011 ದಿನಾಂಕ:09.08.2011
2. ಅಪರ ನಿಬಂಧಕರು, ವಿಚಾರಣೆಗಳು-1 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/14-A/231/2011 /ARE-1 Date:24.07.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ:LOK/INQ/14-A/231/2011 /ARE-1 Date:29.07.2017.
4. ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: LOK/INQ/14-A//231/2011 /ARE-1 Date:31.07.2017.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/659/ಗ್ರಾಪಂಕಾ/2017 ದಿನಾಂಕ:09.08.2017.
6. ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 22.08.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಅದರಂತೆ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

ಶ್ರೀ ಹರೀಶ್ ಬಿನ್ ಲೇಟ್ ಚೆನ್ನೇಗೌಡ, ಗೋಣಿಸೋಮನಹಳ್ಳಿ, ಹಾಸನ ಜಿಲ್ಲೆ ಇವರ ಹಳೆ ಮನೆಯ ಖಾತೆಯನ್ನು ಬದಲಾಯಿಸಲು ಇವರಿಂದ 500/- ರೂಗಳ ಲಂಚ ಸ್ವೀಕರಿಸುವಾಗ ದಿನಾಂಕ: 27.02.2009 ರಂದು ಲೋಕಾಯುಕ್ತ ಟ್ರ್ಯಾಪ್‌ಗೆ ಒಳಗಾಗಿ ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966ರ ನಿಯಮ 3(1) (i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತೀರಿ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಎ.ಸಿ ಶಂಕರಪ್ಪ, ಗ್ರಾಮ ಪಂಚಾಯಿತಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುವ ವೇಳೆಯಲ್ಲಿ ಶ್ರೀ ಹರೀಶ್ ಬಿನ್ ಲೇಟ್ ಚೆನ್ನೇಗೌಡ, ಗೋಣಿಸೋಮನಹಳ್ಳಿ, ಹಾಸನ ಜಿಲ್ಲೆ ಇವರ ಹಳೆ ಮನೆಯ ಖಾತೆಯನ್ನು ಬದಲಾಯಿಸಲು ಇವರಿಂದ 500/- ರೂಗಳ ಲಂಚ ಸ್ವೀಕರಿಸುವಾಗ

ದಿನಾಂಕ: 27.02.2009 ರಂದು ಲೋಕಾಯುಕ್ತ ಟ್ರ್ಯಾಪ್‌ಗೆ ಒಳಗಾಗಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(a) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ 25% ಪಿಂಚಣಿ ಸೌಲಭ್ಯವನ್ನು ಶಾಶ್ವತವಾಗಿ ತಡೆಹಿಡಿಯಿವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸ್ಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡಂತೆ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ.

- ಸದರಿಯವರು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ದಿನಾಂಕ 04.07.2015 ರಂದು ಜಿಲ್ಲಾ ಸೆಷನ್ಸ್ ನ್ಯಾಯಾಲಯ ಹಾಸನ ರವರು ನನ್ನನ್ನು ನಿರ್ದೋಷಿ ಎಂದು ತೀರ್ಪು ನೀಡಿರುತ್ತಾರೆ.
- ನಾನು ದಿನಾಂಕ 31.07.2015 ರಂದು ವಯೋನಿವೃತ್ತಿ ಹೊಂದಿದ್ದು, ನನ್ನ ಪತ್ನಿ ಮತ್ತು ಕುಟುಂಬ ನಿರ್ವಹಣೆ ತುಂಬಾ ಕಷ್ಟಕರವಾಗಿರುತ್ತದೆ. ನಾನು, ನನ್ನ ಪತ್ನಿ ಹೃದಯ ಸಂಬಂಧಿ ಖಾಯಿಲೆ ಹಾಗೂ ರಕ್ತದೊತ್ತಡ ಮತ್ತು ಸಕ್ಕರೆ ಖಾಯಿಲೆಯಿಂದ ಬಳಲುತ್ತಿದ್ದು ಆದ್ದರಿಂದ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶೇ 25 ರಷ್ಟನ್ನು ಕಡಿತಗೊಳಿಸದೆ ನನಗೆ ಅನುಕೂಲ ಮಾಡಿಕೊಡಬೇಕಾಗಿ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪ ಸಾಬೀತು ಪಡಿಸಲು ಈ ಕೆಳಕಂಡ ಸಮರ್ಥನೆ ನೀಡಿರುತ್ತಾರೆ.

ಕಂಡಿಕೆ 18 ರಲ್ಲಿ ಸರ್ವೋಚ್ಛ ನ್ಯಾಯಲಯದ ತೀರ್ಪಿನಂತೆ ಇಲಾಖಾ ವಿಚಾರಣೆ ಹಾಗೂ ಕ್ರಿಮಿನಲ್ ವಿಚಾರಣೆಗಳು ಸಂಪೂರ್ಣ ಬಿನ್ನವಾಗಿರುವುದಾಗಿ ತಿಳಿಸಿ ಆಪಾದನೆಗೆ ಸಂಬಂಧಿಸಿದಂತೆ ವಿವರವಾದ ಕಾರಣಗಳನ್ನು ನೀಡಿರುತ್ತಾರೆ.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರ ನಿರ್ಣಯವನ್ನು ಅಂಗೀಕರಿಸಿದೆ ಮತ್ತು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(a) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ 25% ಪಿಂಚಣಿ ಸೌಲಭ್ಯವನ್ನು ಶಾಶ್ವತವಾಗಿ ತಡೆಹಿಡಿಯಿವ ದಂಡನೆ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:659:ಗ್ರಾಪಂಕಾ:2017 ಬೆಂಗಳೂರು, ದಿನಾಂಕ–17–10–2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ. ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ. ಬೇಲೂರು ತಾಲ್ಲೂಕು. ಹಾಸನ ಜಿಲ್ಲೆ ರವರು ಶ್ರೀ ಪರೀಶ್ ಬಿನ್ ಲೇಟ್ ಚೆನ್ನೇಗೌಡ. ಗೋಣಿಸೋಮನಹಳ್ಳಿ. ಹಾಸನ ಜಿಲ್ಲೆ ಇವರ ಹಳೆ ಮನೆಯ ಖಾತೆಯನ್ನು ಬದಲಾಯಿಸಲು ಇವರಿಂದ 500/– ರೂಗಳ ಲಂಚ ಸ್ವೀಕರಿಸುವಾಗ ದಿನಾಂಕ: 27.02.2009

ರಂದು ಲೋಕಾಯುಕ್ತ ಟ್ರ್ಯಾಪ್‌ಗೆ ಒಳಗಾಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 214(1)(a) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ 25% ಪಿಂಚಣಿ ಸೌಲಭ್ಯವನ್ನು ಶಾಶ್ವತವಾಗಿ ತಡೆಹಿಡಿಯಿವ್ವ ದಂಡನೆ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ.
6. ಶ್ರೀ ಎ.ಸಿ ಶಂಕರಪ್ಪ, ಹಿಂದಿನ ಕಾರ್ಯದರ್ಶಿ, ಗೋಣಿ ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.